ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

**ಸಿ.ಸಿ. ಸಂಃ 1351/2021**

| | | |
|---|---|---|
| ಸಾಕ್ಷಿಯ ಹೆಸರುಃ | ಸಾಕಮ್ಮ | ಫ್ರಾಸಾಃಃ 4 |
| ತಂದೆಯ ಹೆಸರುಃ | ಚಂದ್ರಹಾಸ ಶೆಟ್ಟಿ ಪಿ.ಜೆ | ಚಾಸಾಃಃ 4 |
| ವಯಸ್ಸುಃ | 55 ವರ್ಷ | ಪ್ರಮಾಣೀಕರಿಸಿದ<br>ದಿಃ 31.01.2026 |
| ಉದ್ಯೋಗಃ | ಗೃಹಿಣಿ | |
| ವಾಸ ಸ್ಥಳಃ | ಗಾಂಧಿನಗರ, ಪಿರಿಯಾಪಟಟಣ ತಾಃ | |

ಮುಖ್ಯ ವಿಚಾರಣೆಃ ಸಸಅ ರಿಂದಃ

1. ನನಗೆ ಆರೋಪಿಗಳ ಪರಿಚಯವಿದೆ. ಈ ಪ್ರಕರಣದ ವಿಷಯ ನನಗೆ ಗೊತ್ತಿಲ್ಲ. ಚಾಸಾ-2 ರಿಂದ 3 ನನಗೆ ಗೊತ್ತು. ಆರೋಪಿತರು ನಮ್ಮೊಂದಿಗೆ ಯಾವತ್ತೂ ಸಹ ಜಗಳ ಮಾಡಿಲ್ಲ. ಗುಂಪು ಕಟ್ಟಿಕೊಂಡು ಬಂದು ಹಲ್ಲೆ ಮಾಡಿಲ್ಲ, ನಮಗೆ ಅವಾಚ್ಯವಾಗಿ ಬೈದಿಲ್ಲ, ಕೈಗಳಿಂದ, ದೊಣ್ಣೆಯಿಂದ ಅಥವಾ ಕಲ್ಲಿನಿಂದ ಹಲ್ಲೆ ಮಾಡಿಲ್ಲ ಹಾಗೂ ನಮಗೆ ಕೊಲೆ ಬೆದರಿಕೆ ಹಾಕಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

ಪಾಟೀ ಸವಾಲುಃ ಸಸಅ ರವರಿಂದಃ

1. ದಿನಾಂಕ 16.11.2020 ರಂದು ಸಂಜೆ. 6.30 ಗಂಟೆಯ ಸಮಯದಲ್ಲಿ ಗಾಂಧಿನಗರ ಗ್ರಾಮದ ರಾಮಶೆಟ್ಟಿರವರ ಮನೆಯ ಮುಂದೆ ಇರುವ ಜಮೀನಿನ ಮಧ್ಯ ರಸ್ತೆಯಲ್ಲಿ ಈ ಪ್ರಕರಣದ ಆರೋಪಿಗಳು ಅಕ್ರಮ ಗುಂಪು ಕಟ್ಟಿಕೊಂಡು ಬಂದು 2 ನೇ ಆರೊಪಿತನು ಚಾಸಾ - 1 ರವರಿಗೆ ದೊಣ್ಣೆಯಿಂದ ತಲೆಗೆ ಹೊಡೆದನು ಎಂದರೆ ಸರಿಯಲ್ಲ. 1 ನೇ ಆರೆ ೋಪಿತನು ಕಲ್ಲಿನಿಂದ ಚಾಸಾ -2 ರವರ ಬೆನ್ನಿಗೆ ಹೊಡೆದನು ಎಂದರೆ ಸರಿಯಲ್ಲ. 1 ನೇ ಆರೋಪಿತನು ಚಾಸಾ - 1 ರವರ ಎಡ ಕಾಲಿಗೆ ಹೊಡೆದನು ಎಂದರೆ ಸರಿಯಲ್ಲ. 3 , 4 ಮತ್ತು 6 ನೇ ಆರೋಪಿರವರು ನನಗೆ ಮತ್ತು ಚಾಸಾ.3 ರವರುಗಳಿಗೆ ತಮ್ಮ ಕೈಗಳಿಂದ ಹೊಡೆದರು ಎಂದರೆ ಸರಿಯಲ್ಲ. ಆರೋಪಿತರು ನಮಗೆ

ಬೋಳಿ ಮಕ್ಕಳು, ಸೂಳೇ ಮಕ್ಕಳು ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. 3, 4 ಮತ್ತು 6ನೇ ಆರೋಪಿಗಳು ಬಿಡಬೇಡಿ ಇವರನ್ನು ಹೊಡೆಯಿರಿ ಎಂದು ಕುಮ್ಮಕ್ಕು ನೀಡುತ್ತಿದ್ದರು ಎಂದರೆ ಸರಿಯಲ್ಲ. ನಂತರ 1 ರಿಂದ 3 ನೇ ಆರೋಪಿರವರು ನಮಗೆ ತಿರುಗಾಡುವ ದಾರಿಯ ವಿಚಾರದಲ್ಲಿ ಕೇಳಲು ಬಂದರೇ ನಿಮ್ಮನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆ ವಿಚಾರವಾಗಿ ನಾನು ಈಗ ಓದಿ ಹೇಳಿ ಕೇಳಿಸಿಕೊಂಡಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ - 5 ಎಂದು ಗುರುತಿಸಲಾಯಿತು.

2. ಈಗ ನಾವು ಮತ್ತು ಆರೋಪಿತರು ಪರಸ್ಪರ ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಅದೇ ಕಾರಣಕ್ಕೆ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ವಕೀಲರಿಂದಃ</u>

ಇಲ್ಲ.

<u>ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>
<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಪಿರಿಯಾಪಟ್ಟಣ